ಕರ್ನಾಟಕ ಸರ್ಕಾರ

ನಿರ್ದೇಶಕರ ಕಛೇರಿ, ಪದವಿ ಪೂರ್ವ ಶಿಕ್ಷಣ ಇಲಾಖೆ, ಸಂಪಿಗೆ ರಸ್ತೆ, 18ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು–12

ಸಂಖ್ಯೆ: ಪಪೂಶಿಇ/ಲೈಶಾ/ಹೆ.ಶು.ಕಾ.ಪ/2020–21 ದಿನಾಂಕ: 10.11.2020

## ಸುತ್ತೋಲೆ

ವಿಷಯ: ರಾಜ್ಯದ ಕೆಲವು ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಅಭಿವೃದ್ಧಿ ಶುಲ್ಕದ ಹೆಸರಿನಲ್ಲಿ ಹೆಚ್ಚಿನ ಶುಲ್ಕ ಪಡೆಯುತ್ತಿರುವ ಬಗ್ಗೆ.

ಉಲ್ಲೇಖ: ಮಾನ್ಯ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಹಾಗೂ ಸಕಾಲ ಸಚಿವರ ಟಿಪ್ಪಣಿ:ಪ್ರಾ.ಪ್ರೌ.ಸ.ಸ/9002/2020–21 ದಿನಾಂಕ: 09.11.2020

* * * *

ಮೇಲ್ಕಂಡ ವಿಷಯ ಹಾಗೂ ಉಲ್ಲೇಖಕ್ಕೆ ಸಂಬಂಧಿಸಿದಂತೆ, ರಾಜ್ಯದ ಕೆಲವೊಂದು ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಅಭಿವೃದ್ಧಿ ಶುಲ್ಕದ ಹೆಸರಿನಲ್ಲಿ ವಿದ್ಯಾರ್ಥಿಗಳಿಂದ ಹೆಚ್ಚುವರಿಯಾಗಿ ಶುಲ್ಕ ಪಡೆಯುತ್ತಿರುವುದು ಮಾನ್ಯ ಸಚಿವರ ಗಮನಕ್ಕೆ ಬಂದಿರುವುದಾಗಿ ತಿಳಿಸಿರುತ್ತಾರೆ. ಇದು ಅನಪೇಕ್ಷಿತ ಕಾರ್ಯವಾಗಿದ್ದು, ಇಂತಹ ಪ್ರಕರಣಗಳು ಕಂಡುಬಂದಲ್ಲಿ ಸಂಬಂಧಿಸಿದ ಕಾಲೇಜುಗಳ ಪ್ರಾಂಶುಪಾಲರನ್ನೇ ನೇರ ಹೊಣೆಗಾರರನ್ನಾಗಿಸಿ ಸೂಕ್ತ ಶಿಸ್ತುಕ್ರಮ ತೆಗೆದುಕೊಳ್ಳಲಾಗುವುದು. ಸಂಬಂಧಿಸಿದಂತೆ ಎಲ್ಲಾ ಜಿಲ್ಲಾ ಉಪನಿರ್ದೇಶಕರು ತಮ್ಮ ಜಿಲ್ಲೆಯ ಎಲ್ಲಾ ಸರ್ಕಾರಿ ಪದವಿ ಪೂರ್ವ ಕಾಲೇಜುಗಳ ಪ್ರಾಂಶುಪಾಲರಿಗೆ ಸೂಚನೆ ನೀಡಿ, ತೆಗೆದುಕೊಂಡಿರುವ ಕ್ರಮದ ಬಗ್ಗೆ ಅನುಪಾಲನ ವರದಿಯನ್ನು ಕೇಂದ್ರ ಕಛೇರಿಗೆ ತುರ್ತಾಗಿ ಸಲ್ಲಿಸಲು ಸೂಚಿಸಿದೆ.

ಮಾನ್ಯ ನಿರ್ದೇಶಕರಿಂದ ಅನುಮೋದಿಸಲ್ಪಟ್ಟಿದೆ.

R Kusum
10/11/2020
ಜಂಟಿನಿರ್ದೇಶಕರು(ಶೈಕ್ಷಣಿಕ)
ಪದವಿ ಪೂರ್ವ ಶಿಕ್ಷಣ ಇಲಾಖೆ

ಪ್ರತಿಗಳನ್ನು :

1. ಮಾನ್ಯ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಹಾಗೂ ಸಕಾಲ ಸಚಿವರರವರಿಗೆ ಗೌರವ ಪೂರ್ವಕವಾಗಿ ಮಾಹಿತಿಗಾಗಿ
2. ರಾಜ್ಯದ ಎಲ್ಲಾ ಜಿಲ್ಲೆಗಳ ಉಪನಿರ್ದೇಶಕರುಗಳಿಗೆ ಸೂಕ್ತ ಕ್ರಮಕ್ಕಾಗಿ
3. ಇ–ಆಡಳಿತ ಶಾಖೆ – ಇಲಾಖೆಯ ಅಂತರ್ಜಾಲದಲ್ಲಿ ಅಳವಡಿಸಲು
4. ಹೆಚ್ಚುವರಿ / ಕಛೇರಿ ಪ್ರತಿ.

Scanned with CamScanner